# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 456 |
| ಸದಸ್ಯರ ಹೆಸರು | : | ಶ್ರೀ ಕೆ.ವಿ ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಗಳು |
| ಉತ್ತರಿಸಬೇಕಾದ ದಿನಾಂಕ | : | 10.12.2020 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 2019-20ನೇ ಸಾಲಿನಲ್ಲಿ ಮೈಸೂರು ಜಿಲ್ಲೆಯಲ್ಲಿ ಮಾನ್ಯ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಶಾಸಕರು ನೀಡಿರುವ ಕ್ರಿಯಾಯೋಜನೆ ಪಟ್ಟಿಯಲ್ಲಿರುವ ಎಲ್ಲಾ ಕಾಮಗಾರಿಗಳಿಗೆ ಸರ್ಕಾರ ಈಗಾಗಲೇ ಸೂಚಿಸಿರುವಂತೆ ಕಾರ್ಯಾದೇಶ ನೀಡಿ ಅನುದಾನ ಬಿಡುಗಡೆಗೊಳಿಸಲಾಗಿದೆಯೇ; | ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಶಾಸಕರು ನೀಡಿರುವ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿ ಕಾರ್ಯಾದೇಶ ನೀಡುವ ಜವಾಬ್ದಾರಿ ಜಿಲ್ಲಾಧಿಕಾರಿಗಳಿಗೆ ಸಂಬಂಧಿಸಿರುತ್ತದೆ.<br><br>ಅನುದಾನ ಬಿಡುಗಡೆಗೊಳಿಸುವ ಜವಾಬ್ದಾರಿ ರಾಜ್ಯ ಸರ್ಕಾರದಾಗಿದ್ದು, ಆರಂಭಿಕ ಶಿಲ್ಕು ಮತ್ತು ಬಿಡುಗಡೆಗೊಳಿಸಿದ ಅನುದಾನ ಸೇರಿ ಶೇಕಡ 75 ರಷ್ಟು ವೆಚ್ಚ ಭರಿಸಿದಾಗ ಆರ್ಥಿಕ ಇಲಾಖೆಯ ಸಹಮತಿಯಂತೆ ಅನುದಾನ ಬಿಡುಗಡೆಗೆ ಕ್ರಮ ವಹಿಸಲಾಗಿರುತ್ತದೆ.<br><br>2019-20ನೇ ಸಾಲಿನಲ್ಲಿ ಮೈಸೂರು ಜಿಲ್ಲಾಧಿಕಾರಿಗಳ ಪಿ.ಡಿ.ಖಾತೆಯಲ್ಲಿ ಫೆಬ್ರುವರಿ-2019ರ ಅಂತ್ಯಕ್ಕೆ ರೂ.42.07 ಕೋಟಿಗಳ ಅನುದಾನ ಲಭ್ಯವಿದ್ದ ಕಾರಣ ಮೂರು ಮತ್ತು ನಾಲ್ಕನೆಯ ಕಂತಿನ ಅನುದಾನ ಬಿಡುಗಡೆಯಾಗಿರುವುದಿಲ್ಲ. ಸದರಿ ಲಭ್ಯವಿರುವ ಅನುದಾನದಲ್ಲಿ ಶೇಕಡ 75 ರಷ್ಟು ವೆಚ್ಚ ಭರಿಸುವಂತೆ ನಾನು ದಿನಾಂಕ:04.02.2020ರಂದು ಮತ್ತು ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ದಿನಾಂಕ:23.06.2020 ರಂದು ಪತ್ರದ ಮೂಲಕ ಸೂಚನೆ ನೀಡಲಾಗಿರುತ್ತದೆ. |
| ಆ) | ಮೈಸೂರು ಜಿಲ್ಲೆಯನ್ನು ನೋಡಲ್ ಜಿಲ್ಲೆಯಾಗಿ ಆಯ್ಕೆ ಮಾಡಿಕೊಂಡಿರುವ ಪ್ರತಿಯೊಬ್ಬ ಶಾಸಕರು 2019-20ನೇ ಸಾಳಿಗೆ ಎಷ್ಟು ಮೊತ್ತದ ಕಾಮಗಾರಿಗಳಿಗಾಗಿ ಪತ್ರ ನೀಡಿರುತ್ತಾರೆ; (ಪ್ರತಿಯೊಬ್ಬ ಶಾಸಕರ ಕ್ರಿಯಾ ಯೋಜನೆಯ ಮೊತ್ತ ಪ್ರತ್ಯೇಕವಾಗಿ ನೀಡುವುದು) | 2019-20ನೇ ಸಾಲಿನಲ್ಲಿ ಪ್ರತಿ ಕ್ಷೇತ್ರಕ್ಕೆ ರೂ.2.00 ಕೋಟಿಗಳಂತೆ ಕ್ರಿಯಾ ಯೋಜನೆ ರೂಪಿಸಲು ದಿನಾಂಕ:09.12.2020 ರಂದು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ. ಪ್ರಸ್ತುತ, ಮೈಸೂರು ಜಿಲ್ಲೆಯಲ್ಲಿ 11 ಮಾನ್ಯ ವಿಧಾನ ಸಭಾ ಸದಸ್ಯರುಗಳು ಹಾಗೂ 4 ವಿಧಾನ ಪರಿಷತ್ ಸದಸ್ಯರುಗಳಿದ್ದು, ಇವರುಗಳ ಪೈಕಿ ಚಾಮುಂಡೇಶ್ವರಿ ಮತ್ತು ಪಿರಿಯಾಪಟ್ಟಣ ವಿಧಾನ ಸಭಾ ಕ್ಷೇತ್ರದ ಶಾಸಕರುಗಳು ಮಾತ್ರ ರೂ.2.00 ಕೋಟಿಗಳಿಗೆ ಕ್ರಿಯಾ ಯೋಜನೆಯನ್ನು ಸಲ್ಲಿಸಿದ್ದು, ಇನ್ನುಳಿದ ಶಾಸಕರುಗಳು ಪೂರ್ಣ ಪ್ರಮಾಣದಲ್ಲಿ ಕ್ರಿಯಾ ಯೋಜನೆ ಸಲ್ಲಿಸಿರುವುದಿಲ್ಲ. ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ. |
| ಇ) | 2019-20ನೇ ಸಾಲಿನಲ್ಲಿ ಪ್ರತಿಯೊಬ್ಬ ಶಾಸಕರು ಸೂಚಿಸಿರುವ ಕಾಮಗಾರಿಗಳಿಗೆ ಇದುವರೆಗೆ ಎಷ್ಟು ಮೊತ್ತವನ್ನು ಬಿಡುಗಡೆ ಮಾಡಲಾಗಿದೆ? (ಪ್ರತಿಯೊಬ್ಬ ಶಾಸಕರಿಗೆ ಇದುವರೆಗೆ ನೀಡಿರುವ ಅನುದಾನದ ಮೊತ್ತವನ್ನು ಪ್ರತ್ಯೇಕವಾಗಿ ನೀಡುವುದು) | ಮೈಸೂರು ಜಿಲ್ಲೆಯ ಜಿಲ್ಲಾಧಿಕಾರಿಗಳ ಪಿ.ಡಿ.ಖಾತೆಯಲ್ಲಿ ರೂ.41.50 ಕೋಟಿಗಳ ಅನುದಾನವು ಪ್ರಸ್ತುತ ಲಭ್ಯವಿದ್ದು, ಪ್ರತಿ ಕ್ಷೇತ್ರಕ್ಕೆ ರೂ.2.00 ಕೋಟಿ ವೆಚ್ಚ ಭರಿಸಲು ಯಾವುದೇ ತೊಂದರೆ ಇರುವುದಿಲ್ಲ. ಲಭ್ಯವಿರುವ ಅನುದಾನದ ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ. |

ಸಂಖ್ಯೆ:ಪಿಡಿಎಸ್ 99 ಕೆಎಲ್ಎಸ್ 2020

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ

ಅನುಬಂಧ-1

# ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ 2019-20ನೇ ಸಾಲಿನ ವರದಿ

| ಕ್ರಮ ಸಂಖ್ಯೆ | ವಿಧಾನಸಭಾ/ವಿಧಾನ ಪರಿಷತ್ ಸದಸ್ಯರುಗಳು | ಒಟ್ಟು ಕಾಮಗಾರಿಗಳು | ಆಡಳಿತಾತ್ಮಕ ಅನುಮೋದನೆ ನೀಡಿರುವ ಕಾಮಗಾರಿಗಳು | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) | ವೆಚ್ಚ (ರೂ.ಲಕ್ಷಗಳಲ್ಲಿ) | ಬಾಕಿ ಇರುವ ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|---|---|---|---|
| 1 | ಚಾಮರಾಜ | 22 | 3 | 139.00 | 0.00 | 139.00 |
| 2 | ಚಾಮುಂಡೇಶ್ವರಿ | 25 | 9 | 200.25 | 4.88 | 195.38 |
| 3 | ಹೆಗ್ಗಡದೇವನಕೋಟೆ | 18 | 12 | 73.45 | 16.66 | 56.79 |
| 4 | ಹುಣಸೂರು | 22 | 2 | 85.12 | 3.00 | 82.12 |
| 5 | ಕೃಷ್ಣರಾಜ | 0 | 0 | 0.00 | 0.00 | 0.00 |
| 6 | ಕೃಷ್ಣರಾಜನಗರ | 33 | 5 | 100.50 | 14.39 | 86.11 |
| 7 | ನಂಜನಗೂಡು | 7 | 7 | 30.50 | 20.51 | 9.99 |
| 8 | ನರಸಿಂಹರಾಜ | 12 | 1 | 59.90 | 0.00 | 59.90 |
| 9 | ಪಿರಿಯಪಟ್ಟಣ | 48 | 10 | 204.50 | 29.25 | 175.25 |
| 10 | ಟಿ.ನರಸೀಪುರ | 1 | 1 | 49.76 | 0.00 | 49.76 |
| 11 | ವರುಣ | 20 | 5 | 64.00 | 7.13 | 56.88 |
| 1 | ಶ್ರೀ ಆರ್.ಧರ್ಮಸೇನಾ | 4 | 4 | 11.00 | 6.75 | 4.25 |
| 2 | ಶ್ರೀ ಎಸ್.ನಾಗರಾಜು | 14 | 14 | 49.00 | 26.53 | 22.47 |
| 3 | ಶ್ರೀ ಕೆ.ಟಿ.ಶ್ರೀಕಂಠೇಗೌಡ | 0 | 0 | 0.00 | 0.00 | 0.00 |
| 4 | ಶ್ರೀ ಕೆ.ವಿ.ನಾರಾಯಣ ಸ್ವಾಮಿ | 0 | 0 | 0.00 | 0.00 | 0.00 |
| | **ಒಟ್ಟು** | **226** | **73** | **1066.98** | **129.10** | **937.90** |